ಕ್ರಾಂತಿಯ ಕಿಡಿ

ಕಾಯಕಯೋಗಿ

ಸಂಪಾದಕರು : ಬಿ.ಕೆ. ಅರುಣಜ್ಯೋತಿ

KAYAKAYOGI - Morning Daily

ಕನ್ನಡ ದಿನಪತ್ರಿಕೆ

ಮಂಡ್ಯ Mandya	ಸಂಪುಟ - 04 Volume - 04	ಸಂಚಿಕೆ - 92 Issue - 92	RNI No.KARKAN/2018/77805 POST NO. KA/SK/MND/999/2019-2021	ಶನಿವಾರ Saturday	17-07-2021	ಪುಟ - 04 Page - 04	ಬೆಲೆ-ರೂ. 02 Price - 02	ಸಂಪರ್ಕ 9980605484	E-mail kayakayoginews@gmail.com

askmysuru

ಪರಿಸರ, ಪ್ರವಾಸೋದ್ಯಮ, ಆರೋಗ್ಯ, ವ್ಯವಹಾರ, ಕೃಷಿ, ಶಿಕ್ಷಣ, ಜೀವನ ಶೈಲಿ, ಸಂಸ್ಕೃತಿ, ವನ್ಯಜೀವಿಗಳು, ಸಾಧಕರು, ವ್ಯವಹಾರ ಹಾಗೂ ಉದ್ಯಸ್ಥಗಳ ಮಾಹಿತಿ, ಸುದ್ದಿ ಮತ್ತು ಜಾಹಿರಾತುಗಳು.

FREE CLASSIFIEDS

Visit: askmysuru.com/news

9742 9742 34 askmysuru

ದೆಹಲಿಗೆ ಬಿಎಸ್‌ವೈ ದೌಡು

ಬಿಜೆಪಿ ನಾಯಕರ ರಹಸ್ಯ ಮಾತುಕತೆ ಆರಂಭ!

ಬೆಂಗಳೂರು : ಬಿಜೆಪಿಯಲ್ಲಿ ನಾಯಕತ್ವ ಬದಲಾವಣೆ ಚರ್ಚೆ ಸದ್ದು ದೊಡ್ಡ ಸುದ್ದಿಯಲ್ಲಿ ಇರದಿದ್ದರೂ ಜೀವಂತವಿದೆ ಎನ್ನುವುದಕ್ಕೆ ಕೆಲವು ಬೆಳವಣಿಗೆಗಳು ಸಾಕ್ಷಿಯಾಗುತ್ತಿದೆ. ಕೆಲವು ನಾಯಕರ ಬಹಿರಂಗ ಹೇಳಿಕೆಗಳು ಒಂದೆಡೆಯಾದರೆ ಮತ್ತೆ ಕೆಲವು ನಾಯಕರ ಸಭೆಗಳು, ಮಾತುಕತೆಗಳು ಇದಕ್ಕೆ ಪುಷ್ಟಿ ನೀಡುತ್ತಿದೆ.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಪ್ರಧಾನಿ ಭೇಟಿಗೆಂದು ಶುಕ್ರವಾರ ದೆಹಲಿ ವಿಮಾನ ಹತ್ತಿದ ಕೂಡಲೇ ಬಿಜೆಪಿಯಲ್ಲಿ ಕೆಲವು ಬೆಳವಣಿಗೆಗಳು ನಡೆದಿದೆ. ಅತ್ತ ಬಿಎಸ್ ವೈ ತಮ್ಮ ಪುತ್ರರೊಂದಿಗೆ ದೆಹಲಿಯತ್ತ ಮುಖ ಮಾಡಿದ್ದರೆ ಇತ್ತ ಕಂದಾಯ ಸಚಿವ ಆರ್.ಅಶೋಕ್ ಕಚೇರಿಯಲ್ಲಿ ಮಹತ್ವದ ಸಭೆ ನಡೆಯುತ್ತಿದೆ.

ಕಂದಾಯ ಸಚಿವರ ಕಚೇರಿಯಲ್ಲಿ ಸಚಿವರೊಂದಿಗೆ ಗೃಹ ಸಚಿವ ಬಸವರಾಜ್ ಬೊಮ್ಮಾಯಿ, ಆರವಿಂದ ಬೆಲ್ಲದ್ ರಹಸ್ಯ ಮಾತುಕತೆ ನಡೆಸಿದ್ದಾರೆ. ಮುಖ್ಯಮಂತ್ರಿ ಪರ ಪಾಳಯದಲ್ಲಿ ಕಾಣಿಸಿಕೊಂಡಿರುವ ಅಶೋಕ್, ಬೊಮ್ಮಾಯಿ ಮತ್ತು ವಿರೋಧಿ ಪಾಳಯದಲ್ಲಿ ಕಾಣಿಸಿಕೊಂಡಿರುವ ಅರವಿಂದ ಬೆಲ್ಲದ ನಡುವಿನ ಈ ಚರ್ಚೆ ಹಲವು ಕುತೂಹಲಗಳಿಗೆ ಕಾರಣವಾಗಿದೆ.

ರಾಜಭವನಕ್ಕೆ ನಳಿನ್ ಭೇಟಿ: ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ಅವರು ಇಂದು ರಾಜಭವನಕ್ಕೆ ಭೇಟಿ ನೀಡಿದ್ದಾರೆ. ಮುಖ್ಯಮಂತ್ರಿ ದೆಹಲಿ ಭೇಟಿ ಬೆನ್ನಲ್ಲಿಯೇ ರಾಜ್ಯಾಧ್ಯಕ್ಷರ ಈ ಗವರ್ನರ್ ಭೇಟಿ ಕೂಡಾ ಕುತೂಹಲಕ್ಕೆ ಕಾರಣವಾಗಿದೆ.

ನೂತನ ರಾಜ್ಯಪಾಲರಾಗಿ ನೇಮಕರಾದ ಥಾವರ್ ಚಿಂದ್ ಗೆಹ್ಲೋಟ್ ಅವರಿಗೆ ಶುಭ ಕೋರುವ ಹಾಗೂ ಕುಶಲೋಪರಿ ವಿಚಾರಿಸುವ ನೆಪದಲ್ಲಿ ನಳಿನ್ ಕುಮಾರ್ ಕಟೀಲ್ ರಾಜಭವನಕ್ಕೆ ತೆರಳಿದ್ದಾರೆ ಎನ್ನಲಾಗಿದೆ. ಆದರೆ ಇದರೊಂದಿಗೆ ರಾಜಕೀಯ ವಿದ್ಯಮಾನಗಳ ಬಗ್ಗೆ ಕೂಡಾ ಚರ್ಚೆ ನಡೆಸಲಾಗಿದೆ ಎನ್ನುವ ಮಾತುಗಳು ಕೇಳಬರುತ್ತದೆ.

ಸಿಎಂ ಭೇಟಿಯಲ್ಲಿ ಹಲವು ನಿರೀಕ್ಷೆ: ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸಚಿವ ಸಂಪುಟ ಪುನಾರಚನೆಯ ಬಳಿಕ ಇದೇ ಮೊದಲ ಬಾರಿಗೆ ಮುಖ್ಯಮಂತ್ರಿ ಯಡಿಯೂರಪ್ಪ ಇಂದು ದೆಹಲಿಗೆ ಹೊರಟಿದ್ದಾರೆ. ಮುಖ್ಯಮಂತ್ರಿ ಕಚೇರಿ ಮಾಹಿತಿ ಪ್ರಕಾರ ಮೇಕೆದಾಟು ಯೋಜನೆಗೆ ಕೇಂದ್ರದ ಅನುಮತಿ ಪಡೆಯುವ ಸಲುವಾಗಿ ಈ ಭೇಟಿ ನಡೆಯಲಿದೆ. ಆದರೆ ರಾಜ್ಯ ಸಚಿವ ಸಂಪುಟ ಪುನಾರಚನೆಯೂ ಕಾರ್ಯಸೂಚಿಯಲ್ಲಿದೆ ಎನ್ನಲಾಗುತ್ತಿದೆ.

ರಾಜ್ಯದಲ್ಲಿ ಬಿಜೆಪಿ ಸರಕಾರ ಅಧಿಕಾರಕ್ಕೆ ಬಂದು ಜು.26ಕ್ಕೆ 2 ವರ್ಷ ಪೂರೈಸಲಿದೆ. ಸಂಪುಟ ಪುನಾರಚನೆ ಮಾಡಿ ಹೊಸಬರಿಗೆ ಅವಕಾಶ ಕೊಡಬೇಕೆಂಬ ಬೇಡಿಕೆ ಶಾಸಕರಿಂದ ಇದೆ. ಈ ಹಿನ್ನೆಲೆಯಲ್ಲಿ ಸಂಪುಟ ಪುನಾರಚನೆಯ ಬಗೆಗೂ ಯಡಿಯೂರಪ್ಪ ವರಿಷ್ಠರ ಜತೆಗೆ ಚರ್ಚಿಸುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಬಿಎಸ್ ವೈ ಜೊತೆ ಪುತ್ರರಾದ ರಾಘವೇಂದ್ರ ಮತ್ತು ವಿಜಯೇಂದ್ರ ಕೂಡಾ ದೆಹಲಿಗೆ ತೆರಳಿದ್ದಾರೆ.

ಕೆಆರ್‌ಎಸ್ ಅಣೆಕಟ್ಟೆಯಲ್ಲಿ ವಿಶ್ವ ಪ್ರಸಿದ್ಧಿ ಯೋಜನೆ

ನರ್ಮದಾ ಸರೋವರ ಮಾದರಿಯಲ್ಲಿ ಅಭಿವೃದ್ಧಿ : ಸಚಿವ ಯೋಗೇಶ್ವರ್

ಮಂಡ್ಯ : ಕೆಆರ್‌ಎಸ್ ಅಣೆಕಟ್ಟೆ ಇನ್ನುಮುಂದೆ ರೈತರಿಗೆ ಹಾಗೂ ಕುಡಿಯಲು ಬಳಸುವ ನೀರಿಗಷ್ಟೇ ಉಪಯೋಗವಾಗುವುದಿಲ್ಲ. ಗುಜರಾತ್ ರಾಜ್ಯದ ನರ್ಮದಾ ಸರೋವರದ ಮಾದರಿಯಲ್ಲಿ ಅಣೆಕಟ್ಟೆಯ ಹಿನ್ನೀರನ್ನು ಪ್ರವಾಸೋದ್ಯಮದ ವಿವಿಧ ಕಾರ್ಯಗಳಿಗೆ ಬಳಕೆ ಮಾಡಿಕೊಂಡು ಮಂಡ್ಯ ಜಿಲ್ಲೆಯನ್ನು ಇಡೀ ವಿಶ್ವವೇ ನೋಡುವಂತೆ ಮಾಡಲಾಗುವುದು ಎಂದು ರಾಜ್ಯದ ಪ್ರವಾಸೋದ್ಯಮ ಸಚಿವ ಸಿ.ಪಿ. ಯೋಗೇಶ್ವರ್ ಹೇಳಿದರು.

ಕೃಷ್ಣರಾಜಸಾಗರದ ಹಿನ್ನೀರಿನಲ್ಲಿ ಸಚಿವ ನಾರಾಯಣಗೌಡ, ಜಿಲ್ಲಾಧಿಕಾರಿ ಅಶ್ವಥಿ, ಜಿಪಂ ಸಿಇಒ ದಿವ್ಯಪ್ರಭು ಅವರ ನೇತೃತ್ವದ ಅಧಿಕಾರಿಗಳ ತಂಡದೊಂದಿಗೆ ವಿಶೇಷ ಬೋಟ್‌ನಲ್ಲಿ ತಾಲೂಕಿನ ತ್ರಿವೇಣಿ ಸಂಗಮದ ಮೂಲಕ ಭೂವರಹನಾಥ ದೇಗುಲಕ್ಕೆ ಬಂದು ಹೇಮಾವತಿ ನದಿಯ ಪಕ್ಕದಲ್ಲಿಯೇ ಇರುವ ನಡುಗಡ್ಡೆಯಲ್ಲಿ ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ವತಿಯಿಂದ ಆಯೋಜಿಸಿದ್ದ ಸಾಹಸ ಕ್ರೀಡೆಗಳನ್ನು ವೀಕ್ಷಿಸಿ ಪತ್ರಕರ್ತರನ್ನು ಉದ್ದೇಶಿಸಿ ಮಾತನಾಡಿದರು.

ಅಣೆಕಟ್ಟೆಯಿಂದ ಹೊರಬಿಡಲಾಗುವ ನೀರು ಕೃಷಿಗೆ ಹಾಗೂ ಜನರಿಗೆ ಕುಡಿಯಲು ಉಪಯೋಗವಾದರೆ ಅಣೆಕಟ್ಟೆಯ ಒಳಭಾಗದ ಹಿನ್ನೀರು ವ್ಯರ್ಥವಾಗುವುದರ ಬದಲಾಗಿ ಮನರಂಜನಾ ಕ್ರೀಡೆಗಳಿಗೆ ಅನುಕೂಲವಾಗುವಂತೆ ಯೋಜನೆಗಳನ್ನು ಸಿದ್ಧಪಡಿಸಲಾಗುತ್ತಿದೆ. ಹಿನ್ನೀರಿನ ವ್ಯಾಪ್ತಿಯಲ್ಲಿ ಹಲವಾರು ನಡುಗಡ್ಡೆಗಳಿದ್ದು ಅವುಗಳೆಲ್ಲವನ್ನೂ ಅಭಿವೃದ್ಧೀಪಡಿಸಿ ಪ್ರವಾಸಿಗರಿಗೆ ಬೇಕಾದ ಹೋಟೆಲ್, ರೆಸಾರ್ಟ್, ದೋಣಿ ವಿಹಾರ ಕೇಂದ್ರಗಳು, ಸಾಹಸ ಕ್ರೀಡೆಗಳು ಸೇರಿದಂತೆ ಪ್ರವಾಸಿಗರನ್ನು ಆಕರ್ಷಿಸಲು ಬೇಕಾದ ಎಲ್ಲಾ ಬಗೆಯ ಸೌಲಭ್ಯಗಳನ್ನು ಒದಗಿಸಿಕೊಡಲಾಗುವುದು. ಈ ಎಲ್ಲಾ ಸೌಲಭ್ಯಗಳ ಜೊತೆಗೆ ಹೆಲಿ ಟೂರಿಸಂ ಅನ್ನು ಕೂಡ ಆರಂಭಿಸಲು ಅಗತ್ಯ ಕ್ರಮವನ್ನು ಕೈಗೊಳ್ಳಲಾಗಿದೆ. ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ನಾರಾಯಣಗೌಡರು ಮಂಡ್ಯ ಜಿಲ್ಲೆಯ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸಲು ಪ್ರವಾಸೋದ್ಯಮ ಇಲಾಖೆಗೆ ಯೋಜನೆಯನ್ನು ಕೈಗೆತ್ತಿಕೊಳ್ಳುವಂತೆ ಮನವಿ ಮಾಡಿದ್ದು ಅದಕ್ಕೆ ಪೂರಕವಾಗಿ ಪ್ರವಾಸೋದ್ಯಮ ಇಲಾಖೆಯು ಸ್ಪಂದಿಸಿ ಕೆಲಸ ಮಾಡಲಿದೆ ಎಂದು ಯೋಗೇಶ್ವರ್ ತಿಳಿಸಿದರು.

ರಾಜ್ಯದ ಯುವಜನ ಸಬಲೀಕರಣ ಹಾಗೂ ಕ್ರೀಡಾ ಸಚಿವ ಡಾ.ನಾರಾಯಣಗೌಡ ಮಾತನಾಡಿ, ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಆಕರ್ಷಿಸುವಂತಹ ನೂರಾರು ಸ್ಥಳಗಳಿವೆ. ಆದರೆ ಇದುವರೆವಿಗೂ ಪ್ರವಾಸೋದ್ಯಮ ಇಲಾಖೆಯು ಮಂಡ್ಯ ಜಿಲ್ಲೆಯನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದೆ. ಇನ್ನು ಮುಂದೆ ನಾನೂ ಹೀಗಾಗಲು ಬಿಡುವುದಿಲ್ಲ. ಮಂಡ್ಯ ಜಿಲ್ಲೆಯ ಹೆಸರನ್ನು ಜಾಗತಿಕ ಭೂಪಟದಲ್ಲಿ ಶಾಶ್ವತಗೊಳಿಸುವ ನಿಟ್ಟಿನಲ್ಲಿ ನಾನು ಈಗಾಗಲೇ ಕಾರ್ಯೋನ್ಮುಖನಾಗಿದ್ದೇನೆ. ದೇವಾಲಯಗಳು, ನದಿಗಳ ಹಿನ್ನೀರು ಹಾಗೂ ನಡು ಗಡ್ಡೆಗಳು ಹೀಗೆ ಇರುವ ಎಲ್ಲಾ ಅವಕಾಶಗಳ ಜೊತೆಗೆ ಕೃಷಿಯಲ್ಲಿ ಪಾಂಡಿತ್ಯವನ್ನು ಪಡೆದಿರುವ ನೂರಾರು ರೈತರನ್ನು ಪ್ರವಾಸೋದ್ಯಮ ಇಲಾಖೆಯ ಮೂಲಕ ಪ್ರವಾಸಿಗರು ಸಂದರ್ಶಿಸುವ ಕೆಲಸವನ್ನು ಮಾಡಲಾಗುವುದು ಎಂದು ತಿಳಿಸಿದ ನಾರಾಯಣಗೌಡ ತಾಲೂಕಿನ ಪುರಾಣ ಪ್ರಸಿದ್ಧ ಪುಣ್ಯಕ್ಷೇತ್ರವಾದ ಭೂವರಹನಾಥ ಕಲ್ಲುಳ್ಳೆಯಿಂದ ಹೇಮಾವತಿ ನದಿಗೆ ತೂಗುಸೇತುವೆ ನಿರ್ಮಾಣ ಮಾಡಿ ದ್ವೀಪವನ್ನು ಅಭಿವೃದ್ಧಿಪಡಿಸಿ ಪ್ರವಾಸಿ ತಾಣವನ್ನಾಗಿ ಮಾಡಲಾಗುವುದು ಎಂದು ಹೇಳಿದರು.

ಸಚಿವರೊಂದಿಗೆ ಮಂಡ್ಯ ಡಿಸಿ ಅಶ್ವಥಿ, ಎಡಿಸಿ ಶೈಲಜಾ, ಜಿ.ಪಂ ಸಿಇಒ ದಿವ್ಯಪ್ರಭು, ಪಾಂಡವಪುರ ಉಪವಿಭಾಗ ಗಾಧಿಕಾರಿ ಶಿವಾನಂದಮೂರ್ತಿ, ತಹಶೀಲ್ದಾರ್‌ರಾದ ರೂಪ, ಶಿವಮೂರ್ತಿ, ಸಚಿವ ನಾರಾಯಣಗೌಡರ ಆಪ್ತ ಕಾರ್ಯದರ್ಶಿ ಪ್ರಭಾಕರ್, ಭೂವರಹನಾಥದೇವಾಲಯದ ಮ್ಯಾನೇಜರ್ ಟ್ರಸ್ಟಿ ಶ್ರೀನಿವಾಸ ರಾಘವನ್, ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕ ಡಾ.ಅಂ.ಚಿ.ಸಣ್ಣಸ್ವಾಮಿ ಗೌಡ, ಡಾ.ಆರ್.ಕೆ.ವೆಂಕಟೇಶ್ ಸೇರಿದಂತೆ ಪ್ರವಾಸೋದ್ಯಮ, ಕ್ರೀಡೆ ಹಾಗೂ ಯುವಜನಸೇವಾ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಬೋಟಿಂಗ್ ಚಾಲನೆ : ಪ್ರವಾಸೋದ್ಯಮಕ್ಕೆ ಒತ್ತು ನೀಡುವ ದೃಷ್ಟಿಯಿಂದ ಇಂದು ಕೆ.ಆರ್.ಎಸ್ ಹಿನ್ನೀರಿನಲ್ಲಿ ಪ್ರವಾಸೋದ್ಯಮ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರಾದ ಸಿ.ಪಿ ಯೋಗೇಶ್ವರ್ ಬೋಟಿಂಗ್‌ಗೆ ಚಾಲನೆ ನೀಡಿದರು.

ಬೋಟಿಂಗ್‌ಗೆ ಚಾಲನೆ ನೀಡುವ ಮುನ್ನ ಕೆ.ಆರ್.ಎಸ್ ಹಿನ್ನೀರಿನಲ್ಲಿರುವ ವೇಣುಗೋಪಾಲಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ, ಶ್ರೀವೇಣುಗೋಪಾಲಸ್ವಾಮಿಯ ದರ್ಶನ ಪಡೆದರು.

ಸಚಿವರೊಟ್ಟಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಸಿ ನಾರಾಯಣಗೌಡ ಹಾಗೂ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಗಮದ ಅಧ್ಯಕ್ಷೆ ಚಿತ್ರನಟಿ ಶ್ರುತಿ ಕೂಡ ಕೆ.ಆರ್.ಎಸ್ ಹಿನ್ನೀರಿನಲ್ಲಿನ ನಡುಡ್ಡೆ (ದ್ವೀಪ)ಯ ಪರಿವೀಕ್ಷಣೆ ನಡೆಸಿದರು.

ಸಂಕಷ್ಟಕ್ಕೊಳಗಾದವರಿಗೆ ನೆರವು ಅಗತ್ಯ : ಕೆಟಿಎಸ್

ಮಂಡ್ಯ: ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಕೋವಿಡ್–19 ಸಂಕಷ್ಟದಲ್ಲಿರುವ ನೋಂದಾಯಿತ ಕಟ್ಟಡ ಮತ್ತು ವಲಸೆ ಕಾರ್ಮಿಕರಿಗೆ ಆಹಾರ ದಾನ್ಯಗಳ ಕಿಟ್ ವಿತರಣೆ ಸಮಾರಂಭ ನಗರದ ಅಂಬೇಡ್ಕರ್ ಭವನದಲ್ಲಿ ನಡೆಯಿತು.

ವಿಧಾನಪರಿಷತ್ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ಆಹಾರ ಕಿಟ್ ವಿತರಿಸಿ ಮಾತನಾಡಿ, ಕೋವಿಡ್ ಸಂಕಷ್ಟದ ಸಮಯದಲ್ಲಿ ಕಟ್ಟಡ ಕಾರ್ಮಿಕರು ಕಳೆದ 16 ತಿಂಗಳಿಂದ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದು ನೊಂದವರಿಗೆ ನೆರವು ನೀಡುವುದು ಅನಿವಾರ್ಯ ಎಂದರು.

ಕಷ್ಟಕ್ಕೆ ಸರ್ಕಾರ ಧಾವಿಸಬೇಕೆಂದು ರಾಜ್ಯ ಉಚ್ಚ ನ್ಯಾಯಾಲಯ ಆದೇಶ ಮಾಡಿದ ಹಿನ್ನೆಲೆಯಲ್ಲಿ ಸರ್ಕಾರ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಆವರ ಖಾತೆಗೆ ತಲಾ 3000 ಹಾಗೂ ಆಹಾರ ಕಿಟ್ ವಿತರಣೆ ಮಾಡಲಾಗುತ್ತಿದೆ ಎಂದರು.

ವಿಧಾನಪರಿಷತ್ ಸದಸ್ಯರಿಗೆ ನೀಡುವ 2000 ಆಹಾರ ಕಿಟ್‌ನಲ್ಲಿ ಮಂಡ್ಯ ನಗರದ ಕಟ್ಟಡ ಕಾರ್ಮಿಕರಿಗೆ 1000 ಕಿಟ್, ಕೆರಗೋಡು ಹೋಬಳಿ, ಹಾಗೂ ಕೊಪ್ಪ ಹೋಬಳಿಯ ಕಟ್ಟಡ ಕಾರ್ಮಿಕರಿಗೆ ತಲಾ 500 ಆಹಾರ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ಎಂದರು.

ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಕಟ್ಟಡ ಕಾರ್ಮಿಕರಿಗೆ ಅನೇಕ ಯೋಜನೆಗಳಿದ್ದು ಅಸಂಘಟಿತ ಕಾರ್ಮಿಕರು ಕಾರ್ಮಿಕ ಇಲಾಖೆಯಲ್ಲಿ ನೋಂದಣಿ ಮಾಡಿಸುವ ಮೂಲಕ ಕಾರ್ಮಿಕ ಇಲಾಖೆಯಲ್ಲಿ ಸಿಗುವ ಸೌಲಭ್ಯಗಳನ್ನು ಬಳಸಿಕೊಳ್ಳಿ ಎಂದು ತಿಳಿಸಿದರು.

ಕೋವಿಡ್ ಮೂರನೆಯ ಅಲೆ ಬಗ್ಗೆ ಎಚ್ಚರಿಕೆಯಿಂದಿರಬೇಕು. ಪ್ರತಿಯೊಬ್ಬರು ಸ್ಯಾನಿಟೈಸರ್, ಮಾಸ್ಕ್, ಸಾಮಾಜಿಕ ಅಂತರ ಪಾಲಿಸುವ ಮೂಲಕ ಸರ್ಕಾರದ ನಿರ್ದೇಶನವನ್ನು ಪಾಲಿಸಿ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿಧಾನಪರಿಷತ್ ಸದಸ್ಯ ಶ್ರೀಕಂಠೇಗೌಡ ಅವರು ತಮ್ಮ ಅನುದಾನದಲ್ಲಿ ಮದ್ದೂರು ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಬೆಕ್ಕಳಲೆ ಗಾಂಧಿ ಕಾಲೇಜ್, ಹಾಗೂ ಸರ್ವೋದಯ ಕಾಲೇಜಿಗೆ ಕಂಪ್ಯೂಟರನ್ನು ವಿತರಿಸಿದರು.

ಶಾಸಕ ಎಂ.ಶ್ರೀನಿವಾಸ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಅಸಂಘಟಿತ ಕಾರ್ಮಿಕರಿಗೆ ಆಹಾರ ಕಿಟ್ ವಿತರಿಸಬೇಕು ಎಂದು ಕಾರ್ಮಿಕ ಸಚಿವ ಶಿವರಾಮ್ ಹೆಬ್ಬಾರ್ ಜೊತೆ ಮಾತನಾಡಿದಾಗ ಹಂತ ಹಂತವಾಗಿ ಕೊಡಲು ಹೇಳಿದ್ದಾರೆ ಎಂದು ತಿಳಿಸಿದರು.

ಮನ್‌ಮುಲ್ ಹೋರಾಟ ನಿರಂತರ

ಆಡಳಿತ ಮಂಡಳಿ ಹೇಳಿಕೆ ಅಸಮಂಜಸ : ಮಧುಚಂದನ್

ಮಂಡ್ಯ : ಜಿಲ್ಲೆಯ ಹಾಲು ಉತ್ಪಾದಕ ರೈತರ ಹಿತದೃಷ್ಟಿಯಿಂದ ಜಿಲ್ಲೆಯ ಹಾಲು ಒಕ್ಕೂಟದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ದ ಬಗ್ಗೆ ಪ್ರಶ್ನಿಸಲು ಮುಂದಾದ ಹೋರಾಟದ ಬಗ್ಗೆ ಹಗುರವಾಗಿ ಹೇಳಿಕೆ ನೀಡುವುದು ಮನ್‌ಮುಲ್ ಆಡಳಿತ ಮಂಡಳಿ ಮುಖ್ಯಸ್ಥರಿಗೆ ಸರಿಯಲ್ಲ ಎಂದು ಹಾಲು ಉತ್ಪಾದಕರ ಹೋರಾಟ ಸಮಿತಿ ಅಧ್ಯಕ್ಷ ಎಸ್.ಸಿ. ಮಧುಚಂದನ್ ಅಸಮಾಧಾನ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಸ್ಥೆಯ ಹಿಂದಿನ ಆಡಳಿತ ಮಂಡಳಿಯಲ್ಲಿ ನಡೆದಿರುವ ಅವ್ಯವಹಾರದಲ್ಲಿ ವಸೂಲಿಯಾಗಬೇಕಿರುವ 72 ಕೋಟಿ ರೂ. ಹಣ ವಸೂಲಿಗೆ ಕ್ರಮ ಜರುಗಿಸಿಲ್ಲ. ಪಾರದರ್ಶಕ ವ್ಯವಹಾರ ನಡೆಯುತ್ತಿಲ್ಲ. ಕಳಪೆ ಹಾಲು ಪೂರೈಸುವ ಬಿ.ಎಂ.ಸಿ.ಗಳನ್ನು ಗುರುತಿಸಿ ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ. ಹಾಲು ಉತ್ಪಾದಕರ ಸಹಕಾರ ಸಂಘಗಳ ಸದಸ್ಯರು ಮತ್ತು ನೌಕರರ ಕಲ್ಯಾಣ ಟ್ರಸ್ಟ್ ಹೆಸರಿನಲ್ಲಿ ಖರೀದಿಸಿರುವ ಜಮೀನಿನ ಬಳಕೆಯಾಗುತ್ತಿಲ್ಲ ಎಂಬ ಹತ್ತಾರು ವಿಚಾರಗಳ ಬಗ್ಗೆ ಹೋರಾಟ ನಡೆಸಲು ಮುಂದಾಗಿರುವುದಾಗಿ ತಿಳಿಸಿದರು.

ಜು.13 ರಂದು ಹಾಲು ಒಕ್ಕೂಟದ ಮುಂಭಾಗ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಸಾವಿರಾರು ಮಂದಿ ಹಾಲು ಉತ್ಪಾದಕರನ್ನು ಭೇಟಿ ಮಾಡಿ ಸಮಜಾಯಿಸಿ ನೀಡಲಾಗದ ಆಡಳಿತ ಮಂಡಳಿಯ ಅಧ್ಯಕ್ಷ–ಉಪಾಧ್ಯಕ್ಷರು ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು.

ನನ್ನ ಹೋರಾಟವನ್ನು ಹತ್ತಿಕ್ಕಲು ನಾನು ಹಾಲು ಉತ್ಪಾದಕನೇ ಅಲ್ಲ ಎಂದು ಹೇಳಿಕೆ ನೀಡಿರುವ ಹಾಲು ಒಕ್ಕೂಟದ ಮುಖ್ಯಸ್ಥರ ಹೇಳಿಕೆ ನಿರಾಧಾರವಾಗಿದ್ದು, ನಾನು ಸ್ವಗ್ರಾಮ ಸೂಳಗೆಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಕಳೆದ ಒಂದು ತಿಂಗಳಿನಿಂದ ಹಾಲು ಪೂರೈಕೆ ಮಾಡುತ್ತಿದ್ದೇನೆ. ಈ ಬಗ್ಗೆ ಪರಿಶೀಲಿಸಿ ಎಂದು ಸವಾಲು ಹಾಕಿದರು.

ನಂದಿನಿ ಬ್ರಾಂಡ್ ಬಗ್ಗೆ ಯಾವುದೇ ಆರೋಪ ಮಾಡಿಲ್ಲ. ಜಿಲ್ಲಾ ಹಾಲು ಒಕ್ಕೂಟದಲ್ಲಿ ಪಾರದರ್ಶಕ ಆಡಳಿತಕ್ಕೆ ಒತ್ತು ನೀಡಿ ದಕ್ಷತೆಯಿಂದ ಕಾರ್ಯ ನಿರ್ವಹಿಸಿದರೆ ಸಂಸ್ಥೆ ಬಲವರ್ಧನೆಯಾಗಲಿದೆ ಇದನ್ನು ಮನಗಾಣಬೇಕಾದ ಆಡಳಿತ ಮಂಡಳಿ ಸದಸ್ಯರು ಪ್ರತಿಭಟನಾಕಾರರನ್ನು ಹತ್ತಿಕ್ಕುವ ಕೆಲಸ ಮಾಡಬಾರದು ಎಂದು ಸಲಹೆ ನೀಡಿದರು.

ಗೋಷ್ಠಿಯಲ್ಲಿ ರೈತ ಮುಖಂಡ ಎ.ಎಲ್.ಕೆಂಪೂ ಗೌಡ, ಜಿಲ್ಲಾ ಹಾಲು ಉತ್ಪಾದಕರ ಹೋರಾಟ ಸಮಿತಿ ಉಪಾಧ್ಯಕ್ಷ ಟಿ.ಎಸ್.ಪ್ರಸನ್ನ, ರೈತಮುಖಂಡರಾದ ಲಿಂಗಣ್ಣಾಜಿ, ಮಂಜುನಾಥ್ ಇತರರಿದ್ದರು.

ಆಡಳಿತ ಮಂಡಳಿಗೆ ಕ್ಷಮೆ ಯಾಚನೆ : ಪ್ರತಿಭಟನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡುವ ವೇಳೆ ಆವೇಷದಿಂದ ಆಡಳಿತ ಮಂಡಳಿ ಸದಸ್ಯರ ಬಗ್ಗೆ ಏಕವಚನ ಪದಪ್ರಯೋಗ ಮಾಡಿರುವ ಬಗ್ಗೆ ಕ್ಷಮೆಯಾಚಿಸುವುದಾಗಿ ಮಧುಚಂದನ್ ತಿಳಿಸಿದರು.

ಮಂಡ್ಯದಲ್ಲಿರುವ ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ